# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 987 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮುನಿರಾಜು ಗೌಡ ಪಿ.ಎಂ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24/02/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರು ಚಾಲಕರು ನಿರ್ವಾಹಕರು ಹಾಗೂ ಕ್ಲೀನರ್‌ಗಳು ಅಪಘಾತಗಳಿಗೆ ತುತ್ತಾಗಿ ಮರಣ ಹೊಂದಿದರೆ ನೀಡಲಾಗುವ ಪರಿಹಾರವೇನು? | ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು, ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳಾದ ಆಟೋರಿಕ್ಷಾ, ಟ್ಯಾಕ್ಸಿ, ಸರಕು ಸಾಕಾಣಿಕೆ, ಮ್ಯಾಕ್ಸಿ ಕ್ಯಾಬ್ ಮತ್ತು ಲಾರಿ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರಗಳಿಗೆ ಸಂಬಂಧಿಸಿದಂತೆ, **"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"**ಯನ್ನು ಜಾರಿಗೊಳಿಸುತ್ತಿದ್ದು, ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ:-<br><br>ಅ) **ಅಪಘಾತ ಪರಿಹಾರ ಸೌಲಭ್ಯ:** ಈ ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2 ಲಕ್ಷದ ವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದ ವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br><br>ಆ) **ಶೈಕ್ಷಣಿಕ ಧನ ಸಹಾಯ** : ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ |
| ಆ) | ಸದರಿ ಯೋಜನೆಯ ಕುರಿತು ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳ ಕುರಿತು ಅಸಂಘಟಿತ ಕಾರ್ಮಿಕರಲ್ಲಿ ಅರಿವು ಮೂಡಿಸಲು ಈ ಕೆಳಕಂಡ ಸಂವಹನ ಚಟುವಟಿಕೆಗಳನ್ನು ಕೈಗೊಳ್ಳಲಾಗಿರುತ್ತದೆ.<br>➢ ಕರಪತ್ರ, ದಿನ ಪತ್ರಿಕೆ, ಬ್ಯಾನರ್ಸ್, ಹಾಗೂ ಹೋರ್ಡಿಂಗ್ಸ್‌ಗಳ ಮೂಲಕ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. |

| | | |
|---|---|---|
| | | ➢ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಮಟ್ಟದಲ್ಲಿ ತರಬೇತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.<br>➢ ಕಾರ್ಮಿಕ ಸಹಾಯವಾಣಿ 155214 ಮೂಲಕ ಯೋಜನೆಗಳ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ.<br>➢ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯಲಾಗಿದ್ದು, ಸದರಿ ಕೇಂದ್ರಗಳ ಮೂಲಕ ಕಾರ್ಮಿಕರಿಗೆ ಸೇವಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br>➢ ಯೋಜನೆಗಳ ಕುರಿತಂತೆ ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದೊಂದಿಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ. |
| ಇ) | ಸಾರಿಗೆ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ ಸರ್ಕಾರ ನೀಡಲಾಗುವ ಸಹಾಯಧನಕ್ಕಾಗಿ ಕಳೆದ 5 ವರ್ಷಗಳಲ್ಲಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಎಷ್ಟು ಮಕ್ಕಳಿಗೆ ಸಹಾಯಧನ ನೀಡಲಾಗುತ್ತಿದೆ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು; ಬಾಕಿಯಿರುವ ಅರ್ಜಿಗಳಿಗೆ ಯಾವ ಕಾಲಮಿತಿಯಲ್ಲಿ ಸಹಾಯಧನ ನೀಡಲಾಗುವುದು: | 2018-19ನೇ ಸಾಲಿನಿಂದ ಅಪಘಾತದ ಕಾರಣ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ 10,000/- ರೂ.ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದ್ದು, ಈವರೆಗೆ 1006 ಫಲಾನುಭವಿ ವಿದ್ಯಾರ್ಥಿಗಳಿಗೆ ಒಟ್ಟು ರೂ.1,00,60,000/-ಗಳ ಸೌಲಭ್ಯ ನೀಡಲಾಗಿದೆ.<br><br>ಶೈಕ್ಷಣಿಕ ಸಹಾಯಧನ ಕೋರಿ ಸಲ್ಲಿಸಿದ ಯಾವುದೇ ಅರ್ಜಿಗಳು ಮಂಡಳಿಯಲ್ಲಿ ಬಾಕಿ ಇರುವುದಿಲ್ಲ ಹಾಗೂ ಸ್ವೀಕರಿಸಿದ ಅರ್ಜಿಗಳ ಕುರಿತು ಸ್ಥಳೀಯ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಂದ ಪರಿಶೀಲನಾ ವರದಿ ಪಡೆದು ತಕ್ಷಣವೇ ಸಹಾಯಧನವನ್ನು ವಿದ್ಯಾರ್ಥಿ/ಪೋಷಕರ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗುವುದು. |
| ಈ) | ಸುರಕ್ಷಾ ಚಾಲನೆಯನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಕಳೆದ 5 ವರ್ಷಗಳಲ್ಲಿ ಎಷ್ಟು ಸಾರಿಗೆ ಕಾರ್ಮಿಕರಿಗೆ "ಶ್ರಮ ಸಮ್ಮಾನ ಪ್ರಶಸ್ತಿ" ನೀಡಲಾಗಿದೆ (ವರ್ಷವಾರು ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ ಕಾಇ 467 ಎಲ್ಇಟಿ 2017 ದಿನಾಂಕ:-24-09-2018 ರನ್ವಯ ಸುರಕ್ಷಾ ಚಾಲನೆಯನ್ನು ಉತ್ತೇಜಿಸುವ ಉದ್ದೇಶದಿಂದ 2019ನೇ ಸಾಲಿನಿಂದ ಪ್ರತಿ ವರ್ಷ ಮಾರ್ಚ್ 01 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, ಉತ್ತಮ ಹಾಗೂ ಸುರಕ್ಷತಾ ಚಾಲನೆ ಮಾಡಿದ ತ್ರಿಚಕ್ರ ಹಾಗೂ ನಾಲ್ಕು ಚಕ್ರದ ವಾಹನ ಚಾಲಕರಿಗೆ ಪ್ರತಿ ಜಿಲ್ಲೆಗೆ ಪ್ರತ್ಯೇಕವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ಮತ್ತು 8 ವಿಶೇಷ ಪುರಸ್ಕಾರ ಪ್ರಶಸ್ತಿಗಳು ಸೇರಿ ಒಟ್ಟು 660 ಚಾಲಕರಿಗೆ "ಶ್ರಮ ಸಮ್ಮಾನ ಪ್ರಶಸ್ತಿ" ನೀಡಿ ಗೌರವಿಸಲಾಗುತ್ತಿದೆ. |

| | | |
|---|---|---|
| | | 2019 ಹಾಗೂ 2020ನೇ ಸಾಲುಗಳಲ್ಲಿ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, ವಾರ್ಷಿಕ ತಲಾ 660ರಂತೆ ಒಟ್ಟು 1320 ಚಾಲಕರಿಗೆ "ಶ್ರಮ ಸಮ್ಮಾನ ಪ್ರಶಸ್ತಿ" ನೀಡಿ ಗೌರವಿಸಲಾಗಿದೆ. ಆದರೆ 2021 ಹಾಗೂ 2022ನೇ ಸಾಲುಗಳಲ್ಲಿ ಕೋವಿಡ್-19ರ ಸಾಂಕ್ರಾಮಿಕದ ಕಾರಣ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಲು ಸಾಧ್ಯವಾಗಿರುವುದಿಲ್ಲ. |

**ಕಾಇ 123 ಎಲ್ಇಟಿ 2023**

*(ಅರಬೈಲ್ ಶಿವರಾಂ ಹೆಬ್ಬಾರ್)*
**ಕಾರ್ಮಿಕ ಸಚಿವರು**